ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 23 ನೇ ಸೆಪ್ಟೆಂಬರ್, 2020

ಕೆ.ಆರ್. ಪುರಂ ವಿಧಾನಸಭೆ ಕ್ಷೇತ್ರದಲ್ಲಿನ ನಿವೇಶನ ಮನೆಗಳ ಅವ್ಯವಹಾರದ ಬಗ್ಗೆ

ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

335 (408) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರು ಪೂರ್ವ ತಾಲ್ಲೂಕು, ಕೆ.ಆರ್. ಪುರಂ ವಿಧಾನಸಭಾ ಕ್ಷೇತ್ರದ ಮಹದೇವಪುರ ಸರ್ವೆ ನಂ. 187 ಸರ್ಕಾರಿ ಜಮೀನಿನಲ್ಲಿ ಸ್ಥಳೀಯ ನಗರ ಪಾಲಿಕೆ ಸದಸ್ಯರು ಮತ್ತು ಇನ್ನಿತರರು ನಿವೇಶನಗಳನ್ನು ಮತ್ತು ಮನೆಗಳನ್ನು ಬೇಕಾದವರಿಗೆ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಕುರಿತು ಸಾಕ್ಷಿ ಸಮೇತ ಹಲವು ಬಾರಿ ದೂರು ನೀಡಿದ್ದರೂ ಕ್ರಮ ಕೈಗೊಂಡಿರುವುದಿಲ್ಲವೇ ; (ವಿವರ ನೀಡುವುದು)

(ಇ) ಇಲಾಖೆಯವರು ಶಾಮೀಲಾಗಿರುವುದು ಮೇಲ್ನೋಟಕ್ಕೆ ಕಂಡು ಬಂದಿದ್ದು, ಈ ಬಗ್ಗೆ ಸೂಕ್ತ ತನಿಖೆ ಮಾಡಲಾಗಿದೆಯೇ ;

(ಈ) ಸರ್ಕಾರಿ ಜಾಗಗಳನ್ನು ಈ ರೀತಿ ರಾಜರೋಷವಾಗಿ ಮಾರಾಟ ಮಾಡುತ್ತಿದ್ದರೂ ಕ್ರಮಕೈಗೊಳ್ಳದೆ ಇರಲು ಕಾರಣವೇನು ?